## ಶ್ರೀ ಎಫ್. ಹೆಚ್. ಜಕ್ಕಪ್ಪನವರ, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರು ನಿಯಮ 72 ರಡಿ ಸೂಚಿಸಲಾದ ಗಮನ ಸೆಳೆಯುವ ಸೂಚನೆಗೆ ಉತ್ತರ

**ಪ್ರಶ್ನೆ:**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ (KREIS) ಮೂಲಕ ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಮೊರಬ ಗ್ರಾಮದಲ್ಲಿ ಮತ್ತು ಹುಬ್ಬಳ್ಳಿ ತಾಲೂಕಿನ ಸಿರುಗುಪ್ಪಿ ಗ್ರಾಮದಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳನ್ನು ಸರ್ಕಾರವು 2017 ರಲ್ಲಿ ಮಂಜೂರು ಮಾಡಿದ್ದರೂ, ಪ್ರಸ್ತುತ ಈ ಶಾಲೆಗಳು ಹುಬ್ಬಳ್ಳಿ ನಗರದಲ್ಲಿರುವ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಇದರ ಪರಿಣಾಮವಾಗಿ ಮೂಲವಾಗಿ ಗುರಿಯಾಗಿದ್ದ ಗ್ರಾಮೀಣ ಪ್ರದೇಶದ ಸ್ಥಳೀಯ ವಿದ್ಯಾರ್ಥಿಗಳು ವಸತಿ ಮತ್ತು ಶಿಕ್ಷಣದ ಉದ್ದೇಶಿತ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಆದ್ದರಿಂದ, ಮೊರಬ ಮತ್ತು ಸಿರುಗುಪ್ಪಿ ಗ್ರಾಮಗಳಲ್ಲಿ ಸ್ಥಾಪಿಸಲು ನಿಗದಿತವಾಗಿದ್ದ ಮೂಲ ಸ್ಥಳದಲ್ಲಿಯೇ ಈ ವಸತಿ ಶಾಲೆಗಳನ್ನು ತಕ್ಷಣ ಪ್ರಾರಂಭಿಸುವ ಕುರಿತು ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ಧಾರವಾಡ ಜಿಲ್ಲೆ, ನವಲಗುಂದ ತಾಲ್ಲೂಕಿನ ಮೊರಬ ಗ್ರಾಮದಲ್ಲಿ ನಿರ್ಮಾಣವಾಗಬೇಕಾಗಿರುವ ಡಾ।। ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯು ಹಾಲಿ ಧಾರವಾಡದಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು, ಸದರಿ ವಸತಿ ಶಾಲೆಯ ಸ್ವಂತ ಕಟ್ಟಡ ನಿರ್ಮಾಣಕ್ಕೆ ಮೊರಬ ಗ್ರಾಮದಲ್ಲಿ ಯಾವುದೇ ಸರ್ಕಾರಿ ಜಮೀನು ಲಭ್ಯವಿರುವುದಿಲ್ಲವೆಂದು ತಹಶೀಲ್ದಾರರು, ನವಲಗುಂದ ರವರು ದಿನಾಂಕ:23.08.2023 ರ ಪತ್ರದಲ್ಲಿ ತಿಳಿಸಿರುತ್ತಾರೆ. ಆದುದರಿಂದ, ನವಲಗುಂದ ತಾಲ್ಲೂಕು ಮೊರಬ ಗ್ರಾಮದ ಜಮೀನಿನ ರಿಸ. ನಂ.572/3 ಕ್ಷೇತ್ರ 09 ಎಕರೆ 00 ಗುಂಟೆ ಜಮೀನು ಇದ್ದು, ಸದರಿ ಜಮೀನಿನ ಮಾಲೀಕರು ಪ್ರಸ್ತಾಪಿತ ವಸತಿ ಶಾಲೆ ಕಟ್ಟಡಗಳ ನಿರ್ಮಾಣ ಮಾಡಲು ಸಂಪೂರ್ಣ ಒಪ್ಪಿಗೆ ನೀಡಿರುತ್ತಾರೆ. ಆದರೆ ಸದರಿ ಜಮೀನಿಗೆ ಹಾದು ಹೋಗುವ ಸಂಪರ್ಕ ರಸ್ತೆಯ ನಿರ್ಮಾಣಕ್ಕೆ ಜಮೀನನ್ನು ನೀಡಲು ಪಕ್ಕದಲ್ಲಿರುವ ಜಮೀನಿನ ಮಾಲಿಕರು ನಿರಾಕರಿಸಿರುವುದರಿಂದ, ವಸತಿ ಶಾಲೆಗೆ ಬೇರೆ ಜಮೀನನ್ನು ಖರೀದಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲ್ಲೂಕಿನಲ್ಲಿ ಸಿರುಗುಪ್ಪಿ ಗ್ರಾಮದಲ್ಲಿ ನಿರ್ಮಾಣವಾಗಬೇಕಾಗಿರುವ ಡಾ।। ಬಿ.ಆರ್. ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆಯು ಹಾಲಿ ಹುಬ್ಬಳಿಯಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು ಸದರಿ ವಸತಿ ಶಾಲೆಯ ಸ್ವಂತ ಕಟ್ಟಡ ನಿರ್ಮಾಣಕ್ಕೆ ಯಾವುದೇ ಸರ್ಕಾರಿ ಜಮೀನು ಲಭ್ಯವಿರುವುದಿಲ್ಲ. ಆದುದರಿಂದ, ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲ್ಲೂಕು, ಸಿರುಗುಪ್ಪಿ ಗ್ರಾಮದ ಸರ್ವೆ ನಂ.703/2, 03 ಎಕರೆ 18 ಗುಂಟೆ ಮತ್ತು ಸರ್ವೆ ನಂ.704 ರಲ್ಲಿ 5.35 ಗುಂಟೆ ಒಟ್ಟಾರೆ 9 ಎಕರೆ 13 ಗುಂಟೆ ಜಮೀನನ್ನು ಸದರಿ ವಸತಿ ಶಾಲೆ ಕಟ್ಟಡಗಳ ನಿರ್ಮಾಣಕ್ಕೆ ಈ ಹಿಂದೆ ಜಮೀನಿನ ಮಾಲೀಕರುಗಳು ಪ್ರಸ್ತಾಪಿತ ವಸತಿ ಶಾಲೆ ಕಟ್ಟಡಗಳ ನಿರ್ಮಾಣ ಮಾಡಲು ಒಪ್ಪಿಗೆ ನೀಡಿದ್ದರು. ಆದರೆ, ಪ್ರಸ್ತುತ ಜಮೀನಿನ ಮಾಲೀಕರು ಪ್ರಸ್ತುತ ಇರುವ ಎಸ್.ಆರ್. ದರಕ್ಕಿಂತ ಹೆಚ್ಚಿನ ದರಗಳಿರುವುದರಿಂದ ಜಮೀನನ್ನು ನೀಡಲು ನಿರಾಕರಿಸಿರುತ್ತಾರೆ.

ಆದುದರಿಂದ, ನವಲಗುಂದ ತಾಲ್ಲೂಕಿನ ಮೊರಬ ಗ್ರಾಮದಲ್ಲಿ ಹಾಗೂ ಹುಬ್ಬಳ್ಳಿ ತಾಲ್ಲೂಕಿನ ಶಿರಗುಪ್ಪಿ ಗ್ರಾಮದಲ್ಲಿ ವಸತಿ ಶಾಲೆಗಳನ್ನು ನಿರ್ಮಿಸಲು ಅಗತ್ಯ ಜಮೀನನ್ನು ಖರೀದಿಸಲು ಅಗತ್ಯ ಕ್ರಮವಹಿಸಲಾಗುವುದು.

ಸಕಇ/301/ಎಂಡಿಎಸ್/2025

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು